ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ:**634/2024**

ಪಿ.ಡಬ್ಲ್ಯೂ-**2**
ಸಿ.ಡಬ್ಲ್ಯೂ-**5**

ಸಾಕ್ಷಿಗೆ ದಿನಾಂಕ **30-01-2026** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯ ಹೆಸರು : ಪ್ರಿಯಾಂಕ

ತಂದೆಯ ಹೆಸರು : ಲೋಕೇಶ

ವಯಸ್ಸು : 22 ವರ್ಷ

ಉದ್ಯೋಗ :

ವಾಸಸ್ಥಳ : ಜೋಗಮ್ಮನ ಹಳ್ಳಿ ಗ್ರಾಮ

ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ

ನ್ಯಾಯಾಲಯದ ಮುಂದೆ ಹಾಜರಿರುವ 1 ರಿಂದ 5 ನೇ ಆರೋಪಿತರು ಸಂಬಂಧಿಕರಾಗಬೇಕು. ಚಾ.ಸಾ-1 ನನ್ನ ತಾಯಿ, ಚಾಸಾ 4 ನನ್ನ ದೊಡ್ಡಪ್ಪ,

ನಮ್ಮ ಮತ್ತು ಆರೋಪಿತರ ನಡುವೆ ಯಾವುದೇ ಜಗಳ ನಡೆದಿಲ್ಲ. ಆರೋಪಿತರು ಅಕ್ರಮ ಕೂಟ ಕಟ್ಟಿ ಕೊಂಡು ಬಂದಿರುವುದಿಲ್ಲ. ನಮ್ಮ ಮೇಲೆ ಯಾವುದೇ ಹಲ್ಲೇ ಮಾಡಿರುವುದಿಲ್ಲ . ಅವಾಚ್ಯ ಶಬ್ದಗಳಿಂದ ನಿಂದಿಸಿಲ್ಲ ಮತ್ತು ಪ್ರಾಣ ಬೆದರಿಕೆ ಹಾಕಿಲ್ಲ, ಚಾಸಾ -1 ರವರ ಮಾನಕ್ಕೆ ಕುಂದುಂಟು ಮಾಡಿರುವುದಿಲ್ಲ. ಘಟನೆಗೆ ಸಂಬಂಧಿಸಿದಂತೆ ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಕೋಲನ್ನು ನೋಡಿ ಗುರುತಿಸಿರುವುದಿಲ್ಲ.

**(**ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು**)**

ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ

ದಿ: 26.06.2023 ರಂದು ಮಧ್ಯಾಹ್ನ 12.30 ಗಂಟೆ ಸಮಯದಲ್ಲಿ ನಾವು ನಮ್ಮ ಜಮೀನಿನಲ್ಲಿ ಆರೋಪಿಗಳು ಉಳುಮೆ ಮಾಡುತ್ತಿರುವ ವಿಚಾರವಾಗಿ ನಾನು , ಚಾಸಾ 1 ಮತ್ತು ಚಾಸಾ 5 ರವರು ಹೋದಾಗ ಆರೋಪಿಗಳು ನಮ್ಮನ್ನು ಉದ್ದೇಶಿಸಿ ಅಕ್ರಮ ಕೂಟ ಕಟ್ಟಿಕೊಂಡು ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿಯಲ್ಲ . 1 ಮತ್ತು 2 ನೇ ಆರೋಪಿಗಳು ಚಾಸಾ -1 ರವರನ್ನು ನೆಲದ ಮೇಲೆ

ಕೆಡವಿ ಕೈ ಕಾಲುಗಳಿಂದ ಹೊಡೆದರು ಎಂದರೆ ಸರಿಯಲ್ಲ . 3 ನೇ ಆರೋಪಿ ಚಾಸಾ -1 ರವರಿಗೆ ಕೋಲಿನಿಂದ ಕೈ ಕಾಲುಗಳಿಗೆ ಹೊಡೆದರು ಎಂದರೆ ಸರಿಯಲ್ಲ . 1 ನೇ ಆರೋಪಿ ಚಾಸಾ -1 ರವರ ನೈಟಿಯನ್ನು ಹರಿದು ಹಾಕಿ ಅವರ ಮಾನಕ್ಕೆ ಕುಂದುಂಟುಮಾಡಿದರು ಎಂದರೆ ಸರಿಯಲ್ಲ . ಗಲಾಟೆ ಬಿಡಿಸಲು ಬಂದ ನನಗೆ ಮತ್ತು ಚಾಸಾ 4 ರವರಿಗೆ ಆರೋಪಿಗಳು ಸೇರಿಕೊಂಡು ಅವಾಚ್ಯ ಶಬ್ದಗಳಿಂದ ಬೈದು ಕೈ ಕಾಲುಗಳಿಂದ ಹೊಡೆದರು ಎಂದರೆ ಸರಿಯಲ್ಲ. ಗಲಾಟೆ ಶಬ್ದ ಕೇಳಿ ಅಲ್ಲಿಗೆ ಬಂದ ಭೈರಮ್ಮ ಮತ್ತು ಲಕ್ಷ್ಮಪ್ಪ ಇವರು ಗಲಾಟೆ ಬಿಡಿಸದರು ಎಂದರೆ ಸರಿಯಲ್ಲ . ಆರೋಪಿಗಳು ಜಮೀನಿನ ವಿಚಾರಕ್ಕೆ ಬಂದರೆ ಜೀವ ತೆಗೆಯುತ್ತೇವೆ ಎಂದು ಪ್ರಾಣ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ . ನಾವುಗಳು ಹೊಸದುರ್ಗ ಸರ್ಕಾರಿ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದೆವು ಎಂದರೆ ನನಗೆ ಗೊತ್ತಿಲ್ಲ. ಈ ಕುರಿತು ದಿಃ 30.06.2023 ರಂದು ಚಾಸಾ -1 ರವರು ಪೊಲೀಸರಿಗೆ ದೂರು ನೀಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ .

ಈಗ ಓದಿ ಹೇಳಿದಂತೆ ದಿನಾಂಕ 01.07.2023 ರಂದು ನಾನು ಪೊಲೀಸರಿಗೆ ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ . ಸಾಕ್ಷಿ ಹೇಳಿಕೆ ನಿರಾಕರಿಸಿದ ಕಾರಣ ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಆರೋಪಿತರು ನಮ್ಮ ಸಂಬಂಧಿಕರು ಎಂದರೆ ಸರಿ. ಆರೋಪಿತರು ನಮ್ಮ ವಿರುದ್ಧ ಸಿ ಸಿ ನಂಬರ್ 1084/2023 ರಂತೆ ಪ್ರಕರಣ ದಾಖಲಿಸಿದ್ದಾರೆ ಎಂದರೆ ಸರಿ. ಸದರಿ ಪ್ರಕರಣದಲ್ಲಿ ಆರೋಪಿತರೊಂದಿಗೆ ರಾಜೀಯಾಗಿದ್ದೇನೆಂದರೆ ಸರಿ. ನಿಪಿ-4 ರಂತೆ ನಾನು ಹೇಳಿಕೆ ನೀಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿಗಳ ಪರ ಶ್ರೀ ಹೆಚ್ ಜಿ ಜಿ ವಕೀಲರಿಂದ</u>

ಆರೋಪಿ ಪರ ವಕೀಲರು ತಮ್ಮ ಪರ ಪಾಟೀ ಸವಾಲು ಏನೂ ಇಲ್ಲ ಎಂದು ಸಲ್ಲಿಸುತ್ತಾರೆ.

ಮರುವಿಚಾರಣೆ ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**
ಓ.ಹೇ.ಕೆ.ಸರಿ ಇದೆ.

(ಪ್ರಸನ್ನಕುಮಾರ್ ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಹೊಸದುರ್ಗ.